ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ವಿಶ್ವ ವಿದ್ಯಾಲಯಗಳಲ್ಲಿ 371 ಜೆ ಮೀಸಲಾತಿ ನೀಡುವ ಕುರಿತು

ಶ್ರೀ ಶಶಿಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-

591(726) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಹೊರಗಡೆ ಇರುವ ವಿಶ್ವ ವಿದ್ಯಾಲಯಗಳ 371ಜೆ ಅನ್ವಯ ಪಿ.ಹೆಚ್.ಡಿ/ಎಂ.ಫಿಲ್ ಕೋರ್ಸ್ ಪ್ರವೇಶ ಪ್ರಕ್ರಿಯೆಯಲ್ಲಿ ಕಲ್ಯಾಣ ಕರ್ನಾಟಕದ ವಿದ್ಯಾರ್ಥಿಗಳಿಗೆ ಮೀಸಲಾತಿ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಕಲ್ಯಾಣ ಕರ್ನಾಟಕದ ವಿದ್ಯಾರ್ಥಿಗಳಿಗೆ ಪಿ.ಹೆಚ್.ಡಿ./ಎಂ.ಫಿಲ್ ಪ್ರವೇಶದಲ್ಲಿ 371ಜೆ ಮೀಸಲಾತಿ ಒದಗಿಸಲು ಸರ್ಕಾರ ಕೈಗೊಳ್ಳುವ ಕ್ರಮವೇನು;

(ಇ) ಯಾವ ಕಾಲಮಿತಿಯೊಳಗೆ 371ಜೆ ಅನ್ವಯ ಎಲ್ಲಾ ವಿಶ್ವ ವಿದ್ಯಾಲಯಗಳಲ್ಲಿ ಮೀಸಲಾತಿ ಅನುಷ್ಠಾನ ಮಾಡಲಾಗುತ್ತದೆ?